ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 12/3/21

ಸಿ.ಡಿ ಪ್ರಕರಣ: ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿಕೆ

# ಪ್ರಾಥಮಿಕ ತನಿಖೆ ವರದಿ ಆಧರಿಸಿ ಎಫ್ಐಆರ್

ಪ್ರಜಾವಾಣಿ ವಾರ್ತೆ 12-3-21

ಬೆಂಗಳೂರು: ಬಿಜೆಪಿ ಶಾಸಕ ರಮೇಶ ಜಾರಕಿಹೊಳಿ ವಿರುದ್ಧದ ಆರೋಪಕ್ಕೆ ಸಂಬಂಧಿಸಿದ ಸಿ.ಡಿ ಪ್ರಕರಣದ ಕುರಿತು ವಿಶೇಷ ತನಿಖಾ ತಂಡವು (ಎಸ್ಐಟಿ) ಪ್ರಾಥಮಿಕ ವಿಚಾರಣೆ ನಡೆಸಿ ಸಲ್ಲಿಸುವ ವರದಿಯನ್ನು ಆಧರಿಸಿ ಎಫ್ಐಆರ್ ದಾಖಲಿಸುವ ಬಗ್ಗೆ ನಿರ್ಧಾರಕ್ಕೆ ಬರಲಾಗುವುದು ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದರು.

ಮಾಧ್ಯಮ ಪ್ರತಿನಿಧಿಗಳ ಜತೆ ಗುರುವಾರ ಮಾತನಾಡಿದ ಅವರು, 'ಸಿ.ಡಿ ಬಿಡುಗಡೆ ಹಿಂದೆ ಷಡ್ಯಂತ್ರ ನಡೆದಿದೆ ಎಂದು ಆರೋಪಿಸಿ ರಮೇಶ ಜಾರಕಿಹೊಳಿ ಪತ್ರ ಬರೆದಿದ್ದರು. ಅವರ ಮನವಿಯಂತೆ ಎಸ್ಐಟಿ ತನಿಖೆಗೆ ಆದೇಶಿಸಲಾಗಿದೆ. ಇಂತಿಷ್ಟೇ ದಿನಗಳಲ್ಲಿ ವರದಿ ನೀಡಬೇಕೆಂದು ತನಿಖಾ ತಂಡಕ್ಕೆ ಗಡುವು ವಿಧಿಸಲಾಗದು. ಆದಷ್ಟು ಬೇಗ ವರದಿ ಸಲ್ಲಿಸುವ ನಿರೀಕ್ಷೆ ಇದೆ' ಎಂದರು.

ತನಿಖೆಯಲ್ಲಿ ಪೊಲೀಸರಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಲಾಗಿದೆ. ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ ರಮೇಶ ಜಾರಕಿಹೊಳಿ ವಿರುದ್ಧ ದೂರು ನೀಡಿರುವುದು, ನಂತರ ದೂರನ್ನು ವಾಪಸ್ ಪಡೆದಿರುವುದು ಸೇರಿದಂತೆ



ಬಸವರಾಜ ಬೊಮ್ಮಾಯಿ

ಎಲ್ಲ ಸಂಗತಿಗಳ ಬಗ್ಗೆ ಪೊಲೀಸರು ಸಮಗ್ರವಾಗಿ ತನಿಖೆ ನಡೆಸುತ್ತಾರೆ. ತನಿಖೆಯ ವರದಿಯನ್ನು ಆಧರಿಸಿ ಅಗತ್ಯ ಕಂಡುಬಂದಲ್ಲಿ ಎಫ್ಐಆರ್ ದಾಖಲಿಸಿ, ಹೆಚ್ಚಿನ ತನಿಖೆ ನಡೆಸಲಾಗುವುದು ಎಂದು ತಿಳಿಸಿದರು.

'ನಕಲಿ ಸಿ.ಡಿ ಆಗಿದ್ದಲ್ಲಿ ತನಿಖೆ ಏಕೆ?' ಎಂಬ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಪ್ರಶ್ನೆ ಕುರಿತು ಪ್ರತಿಕ್ರಿಯಿಸಿದ ಗೃಹ ಸಚಿವರು, 'ನಕಲಿ ಸಿ.ಡಿ ತಯಾರಿಸಿದವರು ಯಾರು? ದರ ಹಿಂದೆ ಯಾರೆಲ್ಲ ಇದ್ದರು? ಯಾವ ಸ್ಥಳಗಳಲ್ಲಿ ಸಿ.ಡಿ ತಯಾರಿಸಲಾಗಿದೆ? ಅದರ ಹಿಂದೆ ಏನೆಲ್ಲಾ ನಡೆದಿದೆ ಎಂಬ ಸಂಗತಿಗಳ ಕುರಿತು ತನಿಖೆ ನಡೆಯಬೇಕಲ್ಲವೆ' ಎಂದು ಮರುಪ್ರಶ್ನೆ ಹಾಕಿದರು.

ಶರ್ಟ್, ಪ್ಯಾಂಟ್ ಬಿಚ್ಚುವುದಕ್ಕೂ ಕಾಂಗ್ರೆಸ್‌ನವರು ಕಾರಣವೇ ಎಂಬ ಶಿವಕುಮಾರ್ ಹೇಳಿಕೆ ಕುರಿತು ಕೇಳಿದಾಗ, 'ಅದೆಲ್ಲವೂ ತನಿಖೆಯಲ್ಲಿ ಗೊತ್ತಾಗುತ್ತದೆ. ಎಲ್ಲ ಆಯಾಮಗಳಿಂದಲೂ ತನಿಖೆ ನಡೆಯಲಿದೆ' ಎಂದರು.

## ತಿಪ್ಪೆ ಸಾರಿಸಲು ತನಿಖೆ: ಎಚ್‌ಡಿಕೆ



ಕುಮಾರಸ್ವಾಮಿ

ಮೈಸೂರು: 'ಸಿ.ಡಿ ಪ್ರಕರಣದಲ್ಲಿ ಯಾವುದೇ ತನಿಖೆ ನಡೆಸಿದರೂ ಪ್ರಯೋಜನವಿಲ್ಲ. ತನಿಖೆಗಳೆಲ್ಲವೂ ತಿಪ್ಪೆ ಸಾರಿಸುವ ಕೆಲಸ' ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ ಗುರುವಾರ ಇಲ್ಲಿ ಸುದ್ದಿಗೋಷ್ಠಿಯಲ್ಲಿ ಟೀಕಿಸಿದರು.

ಬಿಜೆಪಿ ಶಾಸಕ ರಮೇಶ ಜಾರಕಿಹೊಳಿ ವಿರುದ್ಧದ ಸಿ.ಡಿ ಪ್ರಕರಣದ ತನಿಖೆಗೆ ರಾಜ್ಯ ಸರ್ಕಾರ ವಿಶೇಷ ತನಿಖಾ ತಂಡ (ಎಸ್ಐಟಿ) ರಚಿಸಿರುವುದಕ್ಕೆ ಪ್ರತಿಕ್ರಿಯಿಸಿದ ಅವರು, 'ಯಾರ ವಿರುದ್ಧ, ಏನಂತ ತನಿಖೆ ಮಾಡುತ್ತಾರೆ? ಯಾವ ಅಂಶಗಳ ಆಧಾರದಲ್ಲಿ ತನಿಖೆಗೆ ಆದೇಶಿಸಿದ್ದಾರೋ ಗೊತ್ತಿಲ್ಲ' ಎಂದರು.

'ಎಫ್ಎಸ್ಎಲ್ ವರದಿಯಲ್ಲಿ ಸಿ.ಡಿ ನಕಲಿ ಎಂದು ಹೇಳಬಹುದು. ಅದನ್ನು ಬಿಟ್ಟು, ಈ ತನಿಖೆಯಿಂದ ಏನೂ ಆಗದು. ಈ ಹಿಂದೆ ಮೇಟಿ ಪ್ರಕರಣ ಒಳಗೊಂಡಂತೆ ಇನ್ನೂ ಕೆಲವು ಪ್ರಕರಣಗಳಲ್ಲಿ ಇದೇ ರೀತಿ ತನಿಖೆ ನಡೆಸಿ ಕ್ಲೀನ್‌ಚಿಟ್ ಕೊಡಲಾಗಿದೆ. ತಪ್ಪಿತಸ್ಥ ಎನಿಸಿಕೊಂಡು ಯಾರೂ ಜೈಲಿಗೆ ಹೋದ ಉದಾಹರಣೆಯಿಲ್ಲ' ಎಂದು ದೂರಿದರು.

**ಜನರಿಗೆ ರಕ್ಷಣೆ ನೀಡಲು ಸಾಧ್ಯವೇ?:** ಆರು ಸಚಿವರು ನ್ಯಾಯಾಲಯದ ಮೊರೆ ಹೋಗಿರುವುದರ ಬಗ್ಗೆ ಪ್ರತಿಕ್ರಿಯಿಸಿ, 'ಸಚಿವರಾಗಿದ್ದುಕೊಂಡು ತಮಗೆ ತಾವೇ ರಕ್ಷಣೆ ಮಾಡಿಕೊಳ್ಳಲಾಗದೆ ಕೋರ್ಟ್ ಮೊರೆ ಹೋಗುವುದಾದರೆ, ಈ ರಾಜ್ಯದ ಆರೂವರೆ ಕೋಟಿ ಜನರನ್ನು ಹೇಗೆ ರಕ್ಷಣೆ ಮಾಡುತ್ತಾರೆ?' ಎಂದು ವ್ಯಂಗ್ಯವಾಡಿದರು.

'ಈ ಆರು ಮಹಾನುಭಾವರು, ತಮ್ಮ ವಿರುದ್ಧ ಯಾವುದೇ ಅಪಪ್ರಚಾರದ ವಿಷಯಗಳು ಮಾಧ್ಯಮಗಳಲ್ಲಿ ಬರಬಾರದು ಎಂದು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರೆ ಪರವಾಗಿರಲಿಲ್ಲ. ಆದರೆ, ತಮಗೆ ಸಂಬಂಧಿಸಿದ ಸಿ.ಡಿ ಬಿಡುಗಡೆ ಮಾಡಬಾರದು ಎಂದು ಕೋರಿರುವುದು ವಕೀಲರ ಮೂಲಕ ನನ್ನ ಗಮನಕ್ಕೆ ಬಂದಾಗ ಆಶ್ಚರ್ಯವಾಯ್ತು' ಎಂದರು.